# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 202

ಸದಸ್ಯರ ಹೆಸರು : ಶ್ರೀ ಯು.ಬಿ. ವೆಂಕಟೇಶ್

ಉತ್ತರಿಸುವ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು

ಉತ್ತರಿಸುವ ದಿನಾಂಕ : 06.12.2023

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯು ರಾಜ್ಯದ ಎಲ್ಲಾ ತಾಲ್ಲೂಕು/ಹೋಬಳಿಗಳಿಗೂ ಬಸ್ ಸಂಪರ್ಕ ಕಲ್ಪಿಸಿದೆಯೇ; | ಕ.ರಾ.ರ.ಸಾ. ನಿಗಮದಲ್ಲಿ 7574 ಅನುಸೂಚಿಗಳಿಂದ 46954 ಟ್ರಿಪ್‌ಗಳ ಕಾರ್ಯಾಚರಣೆಯನ್ನು ಮಾಡಲಾಗುತ್ತಿದೆ. ನಿಗಮದ ವ್ಯಾಪ್ತಿಯಲ್ಲಿ ಒಟ್ಟು 21670 ಗ್ರಾಮಗಳು ಇದ್ದು, ಇದರಲ್ಲಿ 19531 ಗ್ರಾಮಗಳಿಗೆ ಸಾರಿಗೆ ಸೌಲಭ್ಯವನ್ನು ಒದಗಿಸಲಾಗಿರುತ್ತದೆ. ಉಳಿದ 2139 ಗ್ರಾಮಗಳ ಸಮೀಪದವರೆಗೂ ಸಾರಿಗೆ ಸೌಲಭ್ಯವನ್ನು ಒದಗಿಸಲಾಗಿರುತ್ತದೆ. |
| ಆ | ಕಲ್ಪಿಸದಿದ್ದಲ್ಲಿ, ಗ್ರಾಮಾಂತರ ಪ್ರದೇಶದ ಶಾಲಾ ಮಕ್ಕಳು ಶಾಲೆಗಳಿಗೆ ತೆರಳಲು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಶಾಲಾ ಮಕ್ಕಳಿಗೆ ಅನಾನುಕೂಲವಾಗುತ್ತಿರುವ ಬಗ್ಗೆ ಕೆಲವು ಸ್ಥಳಗಳಲ್ಲಿ ವರದಿಯಾಗಿದ್ದು, ಅಂತಹ ಸ್ಥಳಗಳನ್ನು ಗುರುತಿಸಿ ಆ ಸ್ಥಳಗಳಿಗೆ ನಿಗಮದ ಸಿಬ್ಬಂದಿಗಳನ್ನು ಮೇಲ್ವಿಚಾರಣೆಗಾಗಿ ನಿಯೋಜಿಸಲಾಗುತ್ತಿದೆ ಹಾಗೂ ಬೇಡಿಕೆಗೆ ಅನುಗುಣವಾಗಿ ಹೆಚ್ಚುವರಿ ಸರತಿಗಳನ್ನು ಅಳವಡಿಸಲು ಕ್ರಮ ವಹಿಸಲಾಗುತ್ತಿದೆ.<br><br>ಶಾಲಾ/ಕಾಲೇಜು ವಿದ್ಯಾರ್ಥಿಗಳಿಗೆ ಅವರ ಶಾಲಾ ಕಾಲೇಜು ಸಮಯಕ್ಕೆ ಅವಶ್ಯಕತೆಗೆ ಅನುಗುಣವಾಗಿ ಸುತ್ತುವಳಿಗಳು/ ಬಸ್ಸುಗಳನ್ನು ಕಲ್ಪಿಸಲು ಈ ಕೆಳಕಂಡಂತೆ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ: |
| ಇ | ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಳ್ಳಬಹುದಾದ ಕ್ರಮಗಳೇನು? | • ಗ್ರಾಮೀಣ ಪ್ರದೇಶಗಳ ವಿಭಾಗದ ವ್ಯಾಪ್ತಿಯಲ್ಲಿ ಬರುವ ಶಾಲಾ/ಕಾಲೇಜುಗಳ ಪ್ರಾಂಶುಪಾಲರು/ ಮುಖ್ಯಸ್ಥರುಗಳನ್ನು ಸಂಪರ್ಕಿಸಿ, ಶಾಲಾ/ಕಾಲೇಜುಗಳ ಸಮಯಗಳನ್ನು ತಿಳಿದುಕೊಂಡು ಸದರಿ ಸಮಯಕ್ಕೆ ಸಾರಿಗೆಗಳನ್ನು ಕಾರ್ಯಾಚರಿಸಲು<br>• ಶಾಲಾ/ಕಾಲೇಜು ವಿದ್ಯಾರ್ಥಿಗಳು ಹೆಚ್ಚಿಗೆ ಸೇರುವ ಬಸ್ ನಿಲ್ದಾಣ/ಜಂಕ್ಷನ್‌ಗಳಲ್ಲಿ ಸಾರಿಗೆ ಸೇವೆಗಳ ಮೇಲ್ವಿಚಾರಣೆಗೆ ಸಂಚಾರ ನಿಯಂತ್ರಕರು/ಇತರೆ ಮೇಲ್ವಿಚಾರಕರನ್ನು ನಿಯೋಜಿಸಿ ಸುಗಮ ಕಾರ್ಯಾಚರಣೆ ಕೈಗೊಳ್ಳಲು.<br>• ವಿಭಾಗದ ಎಲ್ಲಾ ಚಾಲನಾ ಸಿಬ್ಬಂದಿಗಳಿಗೆ ಶಾಲಾ ಕಾಲೇಜು ವಿದ್ಯಾರ್ಥಿಗಳು ಬಸ್ಸುಗಳಲ್ಲಿ ಪ್ರಯಾಣಿಸಲು ಅನುವಾಗಲು ನಿಗದಿತ ಬಸ್ ನಿಲ್ದಾಣಗಳಲ್ಲಿ ನಿಲುಗಡೆ ನೀಡಿ ಅವರನ್ನು ಹತ್ತಿಸಿ/ಇಳಿಸಿಕೊಂಡು ಮುಂದೆ ಹೋಗುವುದರ ಜೊತೆಗೆ ವಿದ್ಯಾರ್ಥಿಗಳೊಂದಿಗೆ |

ಸೌಜನ್ಯಯುತವಾಗಿ ವರ್ತಿಸಲು

ನಾಲ್ಕು ರಾಜ್ಯ ರಸ್ತೆ ಸಾರಿಗೆ ನಿಗಮಗಳಲ್ಲಿ ಕಳೆದ 04 ವರ್ಷಗಳಲ್ಲಿ ಹೊಸ ವಾಹನಗಳನ್ನು ಖರೀದಿಸಿರುವುದಿಲ್ಲ.

ಪ್ರಸಕ್ತ ಸಾಲಿನಲ್ಲಿ ಈ ಕೆಳಕಂಡ ಬಸ್ಸುಗಳನ್ನು ಖರೀದಿಸಲು / ಜಿ.ಸಿ.ಸಿ ಆಧಾರದ ಮೇಲೆ ಕಾರ್ಯಾಚರಿಸುವ ಪ್ರಕ್ರಿಯೆ ಜಾರಿಯಲ್ಲಿರುತ್ತದೆ:

**ಕ.ರಾ.ರ.ಸಾ.ನಿಗಮ:-**

- ಸರ್ಕಾರದಿಂದ ಕ.ರಾ.ರ.ಸಾ.ನಿಗಮಕ್ಕೆ ವಿಶೇಷ ಬಂಡವಾಳ ನೆರವಿನಡಿ ರೂ.100.00 ಕೋಟಿಗಳ ಅನುದಾನ ಒದಗಿಸಿ, ಕರ್ನಾಟಕ ಸಾರಿಗೆ ಸಾಮಾನ್ಯ ಮಾದರಿಯ ಒಟ್ಟು 250 ಸಂಖ್ಯೆ ಹೊಸ ವಾಹನಗಳನ್ನು ಖರೀದಿಸಲು ಅನುಮೋದನೆ ನೀಡಲಾಗಿದೆ. ಖರೀದಿಗೆ ಟೆಂಡರ್ ಆಹ್ವಾನಿಸಿದ್ದು, ಪ್ರಕ್ರಿಯೆ ಚಾಲ್ತಿಯಲ್ಲಿದೆ.
- 25 ಹೊಸ ಸಾಮಾನ್ಯ ಕರ್ನಾಟಕ ಸಾರಿಗೆ ಮಾದರಿ ವಾಹನಗಳನ್ನು ಡಿಸೆಂಬರ್-23ರ ಅಂತ್ಯದೊಳಗೆ ಸೇರ್ಪಡೆಗೊಳಿಸಲು ಕ್ರಮ ಜರುಗಿಸಲಾಗಿದೆ.
- 100 ಹೊಸ ಸಾಮಾನ್ಯ ಬಸ್ಸುಗಳನ್ನು ಖರೀದಿಸಲು ಸರಬರಾಜು ಆದೇಶ ನೀಡಿದ್ದು, ಈ ಪೈಕಿ 90 ಬಸ್ಸುಗಳು ಸರಬರಾಜಾಗಿರುತ್ತದೆ.
- 200 ಹೊಸ ಸಾಮಾನ್ಯ ಬಸ್ಸುಗಳನ್ನು ಖರೀದಿಸಲು ಸರಬರಾಜು ಆದೇಶ ನೀಡಲಾಗಿದೆ.
- 40 ಪಲ್ಲಕ್ಕಿ ನಾನ್-ಎ.ಸಿ. ಸ್ಲೀಪರ್ ಬಸ್ಸುಗಳನ್ನು ಖರೀದಿಸಲಾಗಿದೆ.
- 04 ಎ.ಸಿ. ಮತ್ತು 04 ನಾನ್-ಎ.ಸಿ. ಸ್ಲೀಪರ್ ಬಸ್ಸುಗಳನ್ನು ಖರೀದಿಸಲಾಗಿದೆ.
- 300 ಸಂಖ್ಯೆ ವಿದ್ಯುತ್ ಚಾಲಿತ ವಾಹನಗಳನ್ನು ಜಿ.ಸಿ.ಸಿ ಆಧಾರದಲ್ಲಿ ಕಾರ್ಯಾಚರಣೆಗೊಳಿಸಲು ಕ್ರಮ ಜರುಗಿಸಲಾಗುತ್ತಿದ್ದು ಪ್ರಸ್ತಾವನೆ ಪರಿಶೀಲನೆಯಲ್ಲಿರುತ್ತದೆ.
- 350 ಸಂಖ್ಯೆ ಸಾಮಾನ್ಯ ಬಸ್ಸುಗಳನ್ನು ಖರೀದಿಸಲು ಟೆಂಡರ್ ಪ್ರಕ್ರಿಯೆ ಜಾರಿಯಲ್ಲಿದೆ.

**ಬೆಂ.ಮ.ಸಾ.ಸಂಸ್ಥೆ:-**

ಪ್ರಸ್ತುತ ಸಂಸ್ಥೆಯಿಂದ ಪ್ರಯಾಣಿಕರ/ ನೌಕರರ ಅನುಕೂಲಕ್ಕಾಗಿ ಸಂಚಾರ ದಟ್ಟಣೆಗನುಗುಣವಾಗಿ ಸಾರಿಗೆಗಳನ್ನು ಕಾರ್ಯಾಚರಣೆಗೊಳಿಸಲಾಗುತ್ತಿದೆ. ಪ್ರಯಾಣಿಕರ /ವಿದ್ಯಾರ್ಥಿ ಸಮುದಾಯ ವರ್ಗದವರಿಗೆ ಸಾರಿಗೆ ಸೌಲಭ್ಯ ನೀಡುವಲ್ಲಿ ಯಾವುದೇ ತೊಂದರೆ

| | | |
|---|---|---|
| | | **ಕ.ಕ.ರ.ಸಾ.ನಿಗಮ:-**<br><br>ಪ್ರಸಕ್ತ ಸಾಲಿನಲ್ಲಿ ಸಾರಿಗೆ ಸೌಲಭ್ಯಗಳ ಕೊರತೆಯನ್ನು ನೀಗಿಸಲು ಈ ಕೆಳಗಿನಂತೆ ಕ್ರಮ ಕೈಗೊಳ್ಳಲಾಗುತ್ತಿದೆ.:-<br><br>➢ ಸರ್ಕಾರದಿಂದ ನಿಗಮಕ್ಕೆ ವಿಶೇಷ ಬಂಡವಾಳ ನೆರವಿನಡಿ ಒದಗಿಸಿರುವ ರೂ.100.00 ಕೋಟಿಗಳ ಅನುದಾನದಲ್ಲಿ ಪೂರ್ಣ ಕವಚ ನಿರ್ಮಿತ 250 ವೇಗದೂತ ಸಾರಿಗೆಗಳನ್ನು ಖರೀದಿಸಲು ಖರೀದಿಸಲು ಆಡಳಿತಾತ್ಮಕ ಅನುಮೋದನೆ ನೀಡಿ, ಮೊದಲನೇ ಕಂತಿನ ಅನುದಾನ ರೂ.6235.44 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದ್ದು, ಖರೀದಿ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.<br><br>➢ ಪೂರ್ಣ ಕವಚ ನಿರ್ಮಿತ 93 ನಗರ ಸಾರಿಗೆ ಬಸ್ಸುಗಳನ್ನು ಡಲ್ಟ್ ಆರ್ಥಿಕ ಸಹಾಯದಿಂದ ಖರೀದಿಸಲು ಮಂಜೂರಾತಿ ದೊರೆತಿದ್ದು, ಖರೀದಿ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.<br><br>ಶಾಲಾ/ ಕಾಲೇಜುಗಳ ಮುಖ್ಯೋಪಾಧ್ಯಾಯರು/ ಕ್ಷೇತ್ರ ಶಿಕ್ಷಣಾಧಿಕಾರಿಗಳು/ ತಹಶೀಲ್ದಾರಗಳ ಸಮ್ಮುಖದಲ್ಲಿ ಕುಂದು ಕೊರತೆ ಸಭೆಗಳನ್ನು ನಡೆಸಿ, ಬೇಡಿಕೆ/ ಮನವಿಯಂತೆ ಹೆಚ್ಚುವರಿ ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.<br><br>ಪ್ರಸ್ತುತ, ಕಲ್ಪಿಸುತ್ತಿರುವ ಸಾರಿಗೆಗಳು ಗ್ರಾಮೀಣ ಭಾಗದ ಶಾಲಾ/ ಕಾಲೇಜು ವಿದ್ಯಾರ್ಥಿಗಳ ಬೇಡಿಕೆಗೆ ಅನುಗುಣವಾಗಿ ಇರುತ್ತದೆ. ಅದಾಗ್ಯೂ, ಹೆಚ್ಚುವರಿ ಬೇಡಿಕೆ ಬಂದಲ್ಲಿ, ಬೇಡಿಕೆಗೆ ಅನುಗುಣವಾಗಿ ಮೂಲಭೂತ ಸೌಕರ್ಯಗಳನ್ನು ಕ್ರೂಢೀಕರಿಸಿಕೊಂಡು ಮಾರ್ಗ ಸಮೀಕ್ಷೆ ಕೈಗೊಂಡು ಪರಿಶೀಲಿಸಿ ಸಾರಿಗೆ ಸೌಲಭ್ಯವನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. |

ಸಂಖ್ಯೆ: ಟಿಡಿ 178 ಟಿಸಿಕ್ಯೂ 2023

**(ರಾಮಲಿಂಗಾರೆಡ್ಡಿ)**
ಸಾರಿಗೆ ಮತ್ತು ಮುಜರಾಯಿ ಸಚಿವರು

/ಸಮಸ್ಯೆ ಉಂಟಾಗಿರುವುದಿಲ್ಲ ಹಾಗೂ ಕಳೆದ ನಾಲ್ಕು ತಿಂಗಳುಗಳಲ್ಲಿ ಸಂಸ್ಥೆಯಿಂದ 677 ಸುತ್ತುವಳಿಗಳನ್ನು ಹೆಚ್ಚಿಸಿ ಕಾರ್ಯಾಚರಣೆಗೊಳಿಸಲು ಅಗತ್ಯ ಕ್ರಮ ಕೈಗೊಳ್ಳಲಾಗಿದೆ.

ಪ್ರಸಕ್ತ ಸಾಲಿನಲ್ಲಿ ಈ ಕೆಳಕಂಡ ಬಸ್ಸುಗಳನ್ನು ಖರೀದಿಸಲು ಪ್ರಕ್ರಿಯೆ ಜಾರಿಯಲ್ಲಿರುತ್ತದೆ:

- 840 ಬಿ.ಎಸ್-6 ಡೀಸೆಲ್ ಬಸ್
- 921 ಎಲೆಕ್ಟ್ರಿಕ್ ಬಸ್(ಜಿಸಿಸಿ)
- 100 ಫೀಡರ್ ಸರ್ವಿಸ್ (ಜಿಸಿಸಿ)
- 20 ಚಿಕ್ಕ ಬಸ್ (ಫೀಡರ್ ಸರ್ವಿಸ್)
- 05 ಡಬಲ್ ಡೆಕ್ಕರ್ ಬಸ್ ಹವಾನಿಯಂತ್ರಿತ (NCAP)
- 05 ಡಬಲ್ ಡೆಕ್ಕರ್ ಬಸ್ ಹವಾನಿಯಂತ್ರಿತ (DULT)
- 320 ಹವಾನಿಯಂತ್ರಿತ ಎಲೆಕ್ಟ್ರಿಕ್ ಬಸ್‌ಗಳನ್ನು ಕಾರ್ಯಾಚರಿಸಲು

**ವಾ.ಕ.ರ.ಸಾ.ಸಂಸ್ಥೆ:-**

ಪ್ರಸ್ತುತ ಸಂಸ್ಥೆಯಲ್ಲಿ ಲಭ್ಯವಿರುವ ಸಂಪನ್ಮೂಲಗಳನ್ನು ಬಳಸಿಕೊಂಡು ಶಾಲಾ ಮಕ್ಕಳ/ಸಾರ್ವಜನಿಕ ಬೇಡಿಕೆ ಪರಿಶೀಲಿಸಿ ಅವಶ್ಯಕತೆಗನುಗುಣವಾಗಿ ಒಟ್ಟು 1114 ಹೆಚ್ಚುವರಿ ಸರತಿಗಳನ್ನು ಅಳವಡಿಸಿ ಕಾರ್ಯಚರಿಸಲಾಗುತ್ತಿದೆ.

ಪ್ರಸಕ್ತ ಸಾಲಿನಲ್ಲಿ ಸಾರಿಗೆ ಸೌಲಭ್ಯಗಳ ಕೊರತೆಯನ್ನು ನೀಗಿಸಲು ಈ ಕೆಳಗಿನಂತೆ ಕ್ರಮ ಕೈಗೊಳ್ಳಲಾಗುತ್ತಿದೆ.:-

- 50 ಗ್ರಾಮಾಂತರ ಸಾರಿಗೆ ವಾಹನಗಳನ್ನು ಖರೀದಿಸಲಾಗಿದೆ.
- ಗ್ರಾಮಾಂತರ ಸಾರಿಗೆಯ 285 ಹೊಸ ವಾಹನಗಳ ಖರೀದಿ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.
- ಸುಮಾರು 375 ಸಂಖ್ಯೆ ಗ್ರಾಮಾಂತರ ಸಾರಿಗೆಗಳನ್ನು ಖರೀದಿಸಲು ಆಡಳಿತಾತ್ಮಕ ಅನುಮೋದನೆ ನೀಡಿ, ಮೊದಲನೇ ಕಂತಿನ ಅನುದಾನ ರೂ.9353.16 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದ್ದು, ಖರೀದಿ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.
- ಡಲ್ಟ್ ಆರ್ಥಿಕ ಸಹಾಯದಿಂದ 100 ನಗರ ಸಾರಿಗೆ ಬಸ್ಸುಗಳ ಖರೀದಿ ಪ್ರಕ್ರಿಯೆ ಸಹ ಜಾರಿಯಲ್ಲಿರುತ್ತದೆ.
- 20-ನಾನ್ ಎ/ಸಿ ಸ್ಲೀಪರ್ ಹಾಗೂ 04-ಎ/ಸಿ ಸ್ಲೀಪರ್ ವಾಹನಗಳ ಖರೀದಿ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.